# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ    E-mail : kannadapostnews@gmail.com    / ಕನ್ನಡ post    Price: ₹1

Vol.No.02 | Issue. 02 | Pages. 2 | Date: 25-11-2025, TUESDAY    RNI NO: KARKAN/2024/89601    Kannada Daily

ಸಂಪುಟ : 02 - ಸಂಚಿಕೆ : 02 - ಪುಟಗಳು : 2    25-11-2025 ಮಂಗಳವಾರ    Ph: 8762954248    ದರ : ₹1


# ಬೀದಿ ನಾಯಿ ಸೆರೆಗೆ ತುರ್ತು ಕ್ರಮ ಕೈಗೊಳ್ಳಿ

## ಅಧಿಕಾರಿಗಳಿಗೆ ಶಾಸಕ ಸ್ವರೂಪ್ ಸೂಚನೆ | ತಾಪಂ ಸಭಾಂಗಣದಲ್ಲಿ ಕೆಡಿಪಿ ಸಭೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನ್ಯಾಯಾಲಯದ ಆದೇಶದಂತೆ ನಗರಾದ್ಯಂತ ಸಾರ್ವಜನಿಕ ಸ್ಥಳ ಹಾಗೂ ಸರ್ಕಾರಿ ಕಚೇರಿಗಳ ಸುತ್ತಮುತ್ತ ಬೀದಿ ನಾಯಿಗಳ ಹಾವಳಿಗೆ ಕಡಿವಾಣ ಹಾಕಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಶಾಸಕ ಹೆಚ್.ಪಿ.ಸ್ವರೂಪ್ ಸೂಚನೆ ನೀಡಿದರು.

ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಬೀದಿ ನಾಯಿಗಳ ಹಾವಳಿಯಿಂದ ತಾಲೂಕಿನಲ್ಲಿ ಸಾಕಷ್ಟು ಸಮಸ್ಯೆಗಳು ಆಗುತ್ತಿವೆ. ಅದಕ್ಕೆ ಪೂರಕವಾಗಿ ಕೋರ್ಟ್ ಕೂಡ ಬೀದಿ ನಾಯಿಗಳ ಹಾವಳಿ ನಿಯಂತ್ರಣಕ್ಕೆ ಸೂಚನೆ ನೀಡಿದ್ದು, ಕೂಡಲೇ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿ ನಾಯಿಗಳ ಸ್ಥಳಾಂತರಕ್ಕೆ ಕ್ರಮವಹಿಸಬೇಕು ಎಂದರು.

ಮಹಾನಗರ ಪಾಲಿಕೆ ಅಧಿಕಾರಿಗಳು ಶೀಘ್ರವೇ ಕಾರ್ಯಪ್ರವೃತ್ತರಾಗಿ ಹಿಡಿದ ನಾಯಿಗಳನ್ನು ಶೆಡ್‌ನಲ್ಲಿ ಬಿಟ್ಟು ಆರೈಕೆ ಮಾಡುವ ಕೆಲಸ ಮಾಡಬೇಕಿದೆ ಎಂದು ಹೇಳಿದರು.

ಕಂದಾಯ ಇಲಾಖೆ, ಸೆಸ್ಕ್, ಮುಜರಾಯಿ, ಕೃಷಿ ತೋಟಗಾರಿಕೆ ಇಲಾಖೆಗಳು ಸರ್ಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಜೊತೆಗೆ ಬೇಸಿಗೆ ಆರಂಭವಾಗುವ ಮುನ್ನವೇ ಕುಡಿಯುವ ನೀರಿನ ಸಮಸ್ಯೆ ಬಾರದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಂಡು ಅಗತ್ಯವಿರುವ ಪೂರಕ ಕಾಮಗಾರಿ




ನಡೆಸಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ಕೆಲಸ ಮಾಡಬೇಕುಎಂದು ಸೂಚನೆ ನೀಡಿದರು.

### ಚರಂಡಿ ಸ್ವಚ್ಚತೆಗೆ ಸೂಚನೆ

ಗ್ರಾಮೀಣ ಭಾಗದಲ್ಲಿ ಚರಂಡಿಗಳಲ್ಲಿ ಹೂಳು ಹಾಗೂ ಕಸ ಕಡ್ಡಿಗಳಿಂದ ತುಂಬಿ ಭರ್ತಿಯಾಗಿವೆ. ಕೂಡಲೇ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹೂಳು ತೆಗೆಯುವ ಕೆಲಸ ಮಾಡಬೇಕು. ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ನೀಡುವ ಸಲುವಾಗಿ ಸ್ವಚ್ಚತೆ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಿ ತಮ್ಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ವಚ್ಚತೆ ಕಾಯ್ದುಕೊಳ್ಳಬೇಕು ಎಂದು ಸಲಹೆ ನೀಡಿದರು.

ತಾಲೂಕಿನ ಪ್ರತೀ ಗ್ರಾಮ ಪಂಚಾಯಿತಿಗಳಲ್ಲಿ ಕಡ್ಡಾಯವಾಗಿ ನರೇಗಾ ಕಾಮಗಾರಿಗಳನ್ನು ಮಾಡಬೇಕು. ಅದರಿಂದ ಗ್ರಾಮೀಣ ಜನರಿಗೆ ಉದ್ಯೋಗ ಹಾಗೂ ಪಂಚಾಯಿತಿ ವ್ಯಾಪ್ತಿಯ ಅಭಿವೃದ್ದಿ ಕೆಲಸಗಳಿಗೆ ಒತ್ತು ನೀಡಿದಂತೆ ಆಗುತ್ತದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯಾವುದೇ ಯೋಜನೆಗಳು ವಿಫಲವಾಗಬಾರದು. ಅವುಗಳನ್ನು ಸರಿಯಾಗಿ ಬಳಕೆ ಮಾಡಿಕೊಂಡುಅರ್ಹ ಫಲಾನುಭವಿಗಳಿಗೆ ತಲುಪಿಸುವ ಕೆಲಸ ಮಾಡಬೇಕಿದೆ ಎಂದರು.

ತಾಲೂಕಿನ 178 ಅಂಗನವಾಡಿಗಳನ್ನು ಸಕ್ಷಮ ಅಂಗನವಾಡಿಗಳಾಗಿ ಗುರುತಿಸಲಾಗಿದ್ದು ಈ ಪೈಕಿ ಹಾಸನದ 10 ಅಂಗನವಾಡಿಗಳು ಇದೆ. ನ. 28 ರಿಂದ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಅಂಗನವಾಡಿಗಳಿಗೆ ಟಿವಿಗಳನ್ನು ಶಾಸಕ ಸ್ವರೂಪ್ ವಿತರಿಸಿದರು. ಸಭೆಯಲ್ಲಿ ಸದಸ್ಯರಾದ ಮಲ್ಲೇಗೌಡ, ಕರೀಗೌಡ, ತಹಸಿಲ್ದಾರ್ ಗೀತಾ, ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಗಿರೀಶ್ ಮತ್ತಿತರರು ಹಾಜರಿದ್ದರು.

# ಮಕ್ಕಳ ಮಾರಾಟ ಮಾಡಿದರೆ 5 ವರ್ಷ ಜೈಲು ಶಿಕ್ಷೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮಕ್ಕಳನ್ನು ಅನಧಿಕೃತವಾಗಿ ಮಾರಾಟ ಮಾಡುವುದು ಬಾಲ ನ್ಯಾಯ ಕಾಯ್ದೆಯಡಿ ಘೋರ ಅಪರಾಧವಾಗಿದ್ದು ಮಕ್ಕಳ ಮಾರಾಟ ಮಾಡುವವರಿಗೆ ಹಾಗೂ ಕೊಳ್ಳುವವರಿಗೂ 5 ವರ್ಷಗಳ ಸೆರೆವಾಸದ ಜೊತೆಗೆ ರೂ.1 ಲಕ್ಷ ರೂ. ದಂಡ ವಿಧಿಸಲಾಗುತ್ತದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕೆ.ಜಿ.ದಿಲೀಪ್ ಎಚ್ಚರಿಕೆ ನೀಡಿದರು.

ನಗರದ ಸರ್ಕಾರಿ ನರ್ಸಿಂಗ್ ಕಾಲೇಜಿನಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸರ್ಕಾರಿ ಕಾನೂನು ಕಾಲೇಜು ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ದತ್ತು ಮಾಸಾಚರಣೆ-ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಅಪರಾಧದಲ್ಲಿ ಆಸ್ಪತ್ರೆಯ ಸಿಬ್ಬಂದಿ ಶಾಮೀಲಾದರೆ 7 ವರ್ಷ ಸೆರೆವಾಸ ಹಾಗೂ 1 ಲಕ್ಷ ರೂ. ದಂಡ ವಿಧಿಸಲಾಗುತ್ತದೆ. ಅನಾಥ, ನಿರ್ಗತಿಕ, ಬೇಡವಾದ ಅಥವಾ ತಂದೆ-ತಾಯಿಯಿಂದ ತ್ಯಜಿಸಲ್ಪಟ್ಟ ಮಕ್ಕಳನ್ನು ಬಾಲ ನ್ಯಾಯ ಕಾಯ್ದೆ-2015 ಮತ್ತು ದತ್ತು ನಿಯಮಗಳು-2017ರ ಅನ್ವಯ ಕಾನೂನು ಬದ್ಧವಾಗಿ ದತ್ತು ನೀಡಲಾಗುತ್ತದೆ. ಮಕ್ಕಳನ್ನು ದತ್ತು ಪಡೆಯಲು CARA ಅಂತರ್ ಜಾಲತಾಣದಲ್ಲಿ ನೊಂದಣಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ನಗರದಲ್ಲಿರುವ ವಿಶೇಷ ದತ್ತು ಸಂಸ್ಥೆಗಳಾದ ತವರು ಪಬ್ಲಿಕ್ ಚಾರಿಟೆಬಲ್ ಟ್ರಸ್ಟ್, ಕಾಮಧೇನು ಶಿಶು ಮಂದಿರ ಅಥವಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕಚೇರಿ ಸಂಪರ್ಕಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕಾಂತರಾಜು ಮಾತನಾಡಿ, ಮಕ್ಕಳು ನಮ್ಮ ದೇಶ ಮತ್ತು ಕುಟುಂಬದ ಅಮೂಲ್ಯ ಸಂಪತ್ತು.



ಅವರಿಗೆ ಉತ್ತಮ ಜೀವನ ಕಲ್ಪಿಸುವುದು ಕುಟುಂಬದ ಜವಾಬ್ದಾರಿ. ಮಕ್ಕಳನ್ನು ಕಾನೂನು ಬದ್ಧವಾಗಿ ದತ್ತು ಪಡೆಯದಿದ್ದರೆ ಮುಂದೆ ಮಗುವಿನ ಬೆಳವಣಿಗೆ ಮತ್ತು ಮನಸ್ಸಿನ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಆದ್ದರಿಂದ ಮಕ್ಕಳಿಲ್ಲದ ಅಥವಾ ದತ್ತು ಪಡೆಯಲು ಆಸಕ್ತಿ ಇರುವ ದಂಪತಿ ಕಾನೂನು ಬದ್ಧವಾಗಿ ದತ್ತು ಪಡೆಯಬೇಕು. ಆಸ್ಪತ್ರೆಗೆ ಬರುವ ಪೋಷಕರು ವೈದ್ಯರಲ್ಲಿ, ನರ್ಸಿಂಗ್ ಸಿಬ್ಬಂದಿಯಲ್ಲಿ ನಮಗೊಂದು ಮಗು ಕೊಡಿಸಿ ಎಂದು ಕೇಳುವುದು ಸಾಮಾನ್ಯ. ಇಂತಹ ಸಂದರ್ಭಗಳಲ್ಲಿ ಸರಿಯಾದ ಮಾಹಿತಿ ನೀಡಿ ಕಾನೂನುಬದ್ಧವಾಗಿ ಮಗು ಪಡೆಯಲು ಮಾರ್ಗದರ್ಶನ ನೀಡಿ ಎಂದರು.

ಈಗ ಅಂತರ್‌ಜಾಲತಾಣಗಳಲ್ಲಿ ಎಲ್ಲಾ ಮಾಹಿತಿ ಲಭ್ಯವಿದೆ. ಹೆಚ್ಚಿನ ಮಾಹಿತಿಗೆ www.cara.wcd.gov.in ಸಂಪರ್ಕಿಸಬಹುದಾಗಿದೆ ಎಂದರು.

ಪ್ರಾಂಶುಪಾಲರಾದ ರತ್ನಮ್ಮ ಅಧ್ಯಕ್ಷತೆ ವಹಿಸಿದ್ದರು. ಮಕ್ಕಳ ತಜ್ಞ ಡಾ. ಕೋನಾಸಾಗರ್, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಸಮನ್ವಯ ಕೊರತೆಯಿಂದ ಅಭಿವೃದ್ಧಿ ಗೌಣ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಸಮಸ್ಯೆ ಬಗೆಹರಿಸುವಲ್ಲಿ ಅಧಿಕಾರಿಗಳ ಸಮನ್ವಯ ಕೊರತೆಯೇ ಅಭಿವೃದ್ಧಿ ಗೌಣವಾಗಲು ಕಾರಣ ಎಂದು ಶಾಸಕ ಸೀಮೆಂಟ್ ಮಂಜು ಹೇಳಿದರು.

ಸೋಮವಾರ ತಾಲೂಕು ನೌಕರರ ಸಂಘದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಸಂಘದ ಕಚೇರಿಯ ಕಾಮಗಾರಿಗೆ ಇರುವ ಅಡ್ಡಿಗಳಿಗೆ ಇಲಾಖೆಗಳ ಸಮನ್ವಯದ ಕೊರತೆ ಕಾರಣವಾಗಿದೆ. ಪರಸ್ಪರ ಹೊಂದಾಣಿಕೆ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳುವತ್ತ ಅಧಿಕಾರಿಗಳು ಗಮನಹರಿಸಬೇಕು. ಕಟ್ಟಡ ಕಾಮಗಾರಿಗೆ ಶಾಸಕರ ನಿಧಿಯಿಂದ ಐದು ಲಕ್ಷರೂ ನೀಡುವುದಾಗಿ ತಿಳಿಸಿದರು.

ಅಧಿಕಾರಿಗಳಿಗೆ ತಾಲೂಕಿನಲ್ಲಿ ಕೆಲಸ ಮಾಡಲು ಸ್ನೇಹಮಯಿ ವಾತವಾರಣ ಸೃಷ್ಟಿಸಲಾಗಿದೆ ಎಂದರು. ತಾಲೂಕು ನೌಕರರ ಸಂಘದ ಅಧ್ಯಕ್ಷ ತಮ್ಮಣ್ಣ ಶೆಟ್ಟಿ, ಕಾರ್ಯದರ್ಶಿ ಜಗದೀಶ್, ಗೌರವ ಅಧ್ಯಕ್ಷೆ ಶಾಂತ, ಸಲೀಂ, ಶಶಿ, ಪ್ರವೀಣ್ ಕುಮಾರ್, ಕೆಂಚಯ್ಯ ಮುಂತಾದವರಿದ್ದರು.

# ಹೇಮಾವತಿ ನಾಲೆಗೆ ಹಾರಿ ದಂಪತಿ ಸಾವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ಕ್ಷುಲ್ಲಕ ಕಾರಣಕ್ಕೆ ಶುರುವಾದ ಜಗಳ ದಂಪತಿ ಸಾವಿನಲ್ಲಿ ಅಂತ್ಯ ಕಂಡಿರುವ ದಾರುಣ ಘಟನೆ ತಾಲೂಕಿನ ನಂಬಿಹಳ್ಳಿ ಗ್ರಾಮದಲ್ಲಿ ಬೆಳಕಿಗೆ ಬಂದಿದೆ.

ಹೇಮಾವತಿ ನಾಲೆಗೆ ಹಾರಿದ ಪತ್ನಿಯನ್ನು ರಕ್ಷಿಸಲು ತೆರಳಿದ ಪತಿಯು ಮುಳುಗಿದ್ದು ಇಬ್ಬರೂ ಮೃತಪಟ್ಟಿದ್ದಾರೆ. ಗ್ರಾಮದ ಗೋಪಾಲ್ (27) ಹಾಗೂ ಪತ್ನಿ ದೀಪ (24) ಮೃತರು. ಒಂದು ವರ್ಷದ ಹಿಂದಷ್ಟೇ ಮದುವೆಯಾಗಿದ್ದ ದಂಪತಿ ಸಣ್ಣಪುಟ್ಟ ವಿಚಾರಕ್ಕೆ ಗಲಾಟೆ ಮಾಡಿಕೊಳ್ಳುತ್ತಿದ್ದರು. ಭಾನುವಾರ ಬೆಳಿಗ್ಗೆ ಗಂಡನ ಜೊತೆ ಜಗಳವಾಡಿದ ದೀಪ ಆತ್ಮಹತ್ಯೆಯ ನಿರ್ಧಾರದಿಂದ ಗ್ರಾಮ ಸಮೀಪದಲ್ಲೇ ಹಾದು ಹೋಗಿರುವ ಹೇಮಾವತಿ ನಾಲೆಗೆ ಹಾರಿದ್ದಾಳೆ.

ಪತ್ನಿಯನ್ನು ರಕ್ಷಿಸಲು ಗೋಪಾಲ್ ಸಹ ನಾಲೆಗೆ ಹಾರಿದ್ದು ರಭಸವಾಗಿ ಹರಿಯುತ್ತಿದ್ದ ನೀರಿನಲ್ಲಿ ಈಜಿ ದಡ ಸೇರಲು ಸಾಧ್ಯವಾಗದೆ ಜಲ ಸಮಾಧಿ ಆಗಿದ್ದಾರೆ. ದಿಂಡಗೂರು ಗ್ರಾಮದ ಬಳಿ ನಾಲೆಯಲ್ಲಿ ಗೋಪಾಲ್ ಮೃತದೇಹ ಪತ್ತೆಯಾಗಿದೆ. ದೀಪ ಮೃತದೇಹಕ್ಕಾಗಿ ಶೋಧ ಕಾರ್ಯ ಮುಂದುವರಿದಿದೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# 1.15 ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾಮಗಾರಿಗೆ ಚಾಲನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಕಲೇಶಪುರ-ಆಲೂರು ವಿಧಾನಸಭಾ ಕ್ಷೇತ್ರದ ಕಟ್ಟಾಯ ಹೋಬಳಿ ವ್ಯಾಪ್ತಿಯ ಹಳ್ಳಿಗಳಲ್ಲಿ ಸೋಮವಾರ ವಿವಿಧ ಕಾಮಗಾರಿಗೆ ಶಾಸಕ ಸಿಮೆಂಟ್ ಮಂಜು ಶಂಕುಸ್ಥಾಪನೆ ನೆರವೇರಿಸಿದರು.

ಚನ್ನಂಗಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಳ್ಳಿಕೊಪ್ಪಲು, ಕಿತ್ತಾನೆ ರಸ್ತೆ, ಲಕ್ಕನಾಯಕನಹಳ್ಳಿ, ಚನ್ನಂಗಿಹಳ್ಳಿ, ಹುಲಿಹಳ್ಳಿ, ಚಿಕ್ಕಬಾಣಗೆರೆ ಹಾಗೂ ಬಾಚಿಹಳ್ಳಿಬಸವೇಶ್ವರ ದೇವಸ್ಥಾನದ ಕಾಂಪೌಂಡ್ ನಿರ್ಮಾಣ. ಕಟ್ಟಾಯ ಹೋಬಳಿಯ ಬ್ಯಾಡರಹಳ್ಳಿ ಕಾಲೋನಿ, ಶಂಕರನಹಳ್ಳಿ ಪಂಚಾಯಿತಿಯ ಮಲ್ಲಪ್ಪನಹಳ್ಳಿ ಮತ್ತು ಶೆಟ್ಟಿಹಳ್ಳಿ ಗ್ರಾ.ಪಂ. ವ್ಯಾಪ್ತಿಯ ಕಲ್ಲಹಳ್ಳಿ ವ್ಯಾಪ್ತಿಯಲ್ಲಿ ಕಾಂಕ್ರಿಟ್ ರಸ್ತೆ ಹಾಗೂ ಚರಂಡಿ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಅಭಿವೃದ್ಧಿ ಕಾಮಗಾರಿಗೆಂದು ಸರ್ಕಾರ ಒದಗಿಸುವ ಅನುದಾನದ ಹಣವನ್ನು ಬಳಸಿಕೊಂಡು ಸಂಬಂಧಿತ ಇಲಾಖೆಯ ಅಧಿಕಾರಿಗಳು ಸಮಯಕ್ಕೆ ಸರಿಯಾಗಿ ನಿಗದಿತ ಕಾಲ ಮಿತಿಯಲ್ಲಿ ಅಭಿವೃದ್ಧಿ ಕೆಲಸವನ್ನು ಅನು ಷ್ಠಾನಕ್ಕೆ ತರಬೇಕು ಎಂದು ಹೇಳಿದರು.

ಸರ್ಕಾರ ನೀಡುವ ಅನುದಾನಕ್ಕೆ ಆಯಾ ಇಲಾಖೆಯು ನೀಡುವ ಮಾರ್ಗ ಸೂಚಿಯಂತೆ ಅಭಿವೃದ್ಧಿ ಕಾಮಗಾರಿ ಮುಗಿಸಲು ಕಾಲಮಿತಿಯ ಗಡುವು ನೀಡುತ್ತದೆ. ಅದನ್ನು ಗಮನಿಸಿ ಅಧಿಕಾರಿಗಳು ಅನುದಾನ ಸದುಪಯೋಗಕ್ಕೆ ತ್ವರಿತ ಕ್ರಮ ಕೈಗೊಳ್ಳಬೇಕು. ಗುಣಮಟ್ಟದ ಕಾಮಗಾರಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು. ಕಳಪೆ ಕಾಮಗಾರಿ ಎಂಬ ಆರೋಪ ಕೇಳಿ ಬರಬಾರದು. ಇದರ ಬಗ್ಗೆಗಮನಹರಿಸಬೇಕು ಎಂದು ಅವರು ತಿಳಿಸಿದರು.

ಅನುದಾನ ತರುವುದು ಜನಪ್ರತಿನಿಧಿಯ ಕೆಲಸವಾದರೆ ಅದನ್ನು ಉಪಯೋಗಿಸಿಕೊಂಡು ಕೆಲಸ ಮಾಡುವುದು ಅಧಿಕಾರಿಗಳ ಕೆಲಸ. ಪರಸ್ಪರ ಸಮನ್ವಯತೆಯಿಂದ ಜನಪರ ವಾಗಿ ಕೆಲಸ ಮಾಡಿದಾಗ ಮಾತ್ರ ಅಭಿವೃದ್ಧಿ ಕಾಮಗಾರಿ ನಡೆದು ಜನರಿಗೆ ಮೂಲಸೌಲಭ್ಯ ನೀಡಲು ಸಾಧ್ಯವಾಗುತ್ತದೆ. ಇದನ್ನು ಅಧಿಕಾರಿಗಳು ಮರೆಯದೆ ದಕ್ಷತೆ ಮತ್ತು ಪ್ರಾಮಾಣಿಕತೆಯಿಂದ ತಮ್ಮ ಕರ್ತವ್ಯ ನಿರ್ವಹಣೆಗೆ ಮುಂದಾಗಬೇಕು ಎಂದು ಅವರು ಸಲಹೆ ನೀಡಿದರು.

# ಗುರಿ ಸಾಧನೆಯೊಂದೇ ವಿದ್ಯಾರ್ಥಿಗಳ ಆದ್ಯತೆಯಾಗಲಿ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮಕ್ಕಳ ಭವಿಷ್ಯ ಉಜ್ವಲವಾಗಿರಲೆಂದು ತಂದೆ-ತಾಯಿ ಅನುಭವಿಸುವ ಸಂಕಷ್ಟಗಳನ್ನು ಸ್ಮರಿಸಿ ವಿದ್ಯಾರ್ಥಿಗಳು ಉತ್ತಮ ವ್ಯಾಸಂಗ ಮಾಡುವ ಮೂಲಕ ಜೀವನದಲ್ಲಿ ಉನ್ನತ ಗುರಿ ತಲುಪಬೇಕು ಎಂದು ಆದಿಚುಂಚನಗಿರಿ ವಿಶ್ವವಿದ್ಯಾಲಯ ಉಪಕುಲಪತಿ ಡಾ ಎಸ್.ಎನ್.ಶ್ರೀಧರ್ ಹೇಳಿದರು.

ನಗರದ ರಾಜೀವ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಪ್ರಥಮ ವರ್ಷದ ಇಂಜಿನಿಯರಿಂಗ್ ತರಗತಿಗಳ ಪ್ರಾರಂಭೋತ್ಸವದಲ್ಲಿ ಮಾತನಾಡಿ, ವಿದ್ಯಾರ್ಥಿ ಜೀವನ ಅತ್ಯಮೂಲ್ಯವಾಗಿದ್ದು ಸಮಯ ವ್ಯರ್ಥ ಮಾಡದೆ ಅಭ್ಯಾಸದಲ್ಲಿ ತೊಡಗಬೇಕು. ಹೆತ್ತ ತಂದೆ-ತಾಯಿ ಹಾಗು ವಿದ್ಯೆ ಕಲಿಸಿದ ಗುರುಗಳಿಗೆ ಕೀರ್ತಿ ತರಬೇಕು. ಪ್ರಸ್ತುತ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳ ಬಳಕೆ ಮಿತಿ ಮೀರಿದೆ. ಆಧುನಿಕ ತಂತ್ರಜ್ಞಾನದಿಂದ ಲಾಭ ಎಷ್ಟಿದೆಯೋ ನಷ್ಟವೂ ಅಷ್ಟೇ ಇದೆ. ಅವಶ್ಯಕತೆಗೆ ತಕ್ಕಷ್ಟು ಮಾತ್ರ ಮೊಬೈಲ್ ಬಳಕೆ ಮಾಡಬೇಕು. ಉತ್ತಮ ಉದ್ಯೋಗ ಪಡೆಯುವ ನಿಟ್ಟಿನಲ್ಲಿ ತಾವು ಪದವಿಯಲ್ಲಿ ಪಡೆದಿರುವ ಅಂಕಗಳ ಜೊತೆಗೆ ಯಾವ ರೀತಿಯ ಗುಣ ಬೆಳೆಸಿಕೊಳ್ಳುತ್ತೀರಿ ಎಂಬುದು ಮುಖ್ಯವಾಗುತ್ತದೆಂದು ಕಿವಿಮಾತು ಹೇಳಿದರು.

ಪ್ರಾಂಶುಪಾಲ ಡಾ. ಪಿ.ಕೆ.ಮಹೇಶ್ ಮಾತನಾಡಿ, ಸಂಸ್ಥೆಯಲ್ಲಿ ಲಭ್ಯವಿರುವ ಕೋರ್ಸ್‌ಗಳ ವಿವರ ಹಾಗು ಸಂಸ್ಥೆಯ ನೀತಿ ನಿಯಮಗಳ ಬಗ್ಗೆ ಮನವರಿಕೆ ಮಾಡಿಕೊಟ್ಟರು. ರಾಜೀವ್ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಡಾ. ಬಿ.ಎನ್. ರತ್ನ ಮಾತನಾಡಿ, ಸಂಸ್ಥೆಯಲ್ಲಿ ಲಭ್ಯವಿರುವ ಅತ್ಯಾಧುನಿಕ ಸವಲತ್ತುಗಳನ್ನು ಬಳಸಿಕೊಂಡು ಆ ಮೂಲಕ ಅಭಿವೃದ್ಧಿ ಹೊಂದಿ ಸಂಸ್ಥೆಗೆ ಕೀರ್ತಿ ತರಬೇಕು ಎಂದು ತಿಳಿಸಿದರು.

ಸಂಸ್ಥೆಯ ಅಧ್ಯಕ್ಷೆ ಡಾ. ರಚನಾ ರಾಜೀವ್, ಉಪಾಧ್ಯಕ್ಷ ಡಾ. ರಂಜಿತ್ ಹಾಗೂ ಇತರರಿದ್ದರು.

# ಬೆಂಗಳೂರಿನ ನೆಹರು ತಾರಾಲಯಕ್ಕೆ ವಿದ್ಯಾರ್ಥಿಗಳ ಭೇಟಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ತಾಲೂಕಿನ ಹಿರೀಸಾವೆ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ವತಿಯಿಂದ ಒಂದು ದಿನದ ಪ್ರವಾಸ ಕೈಗೊಂಡಿದ್ದು ಬೆಂಗಳೂರಿನ ನೆಹರು ತಾರಾಲಯಕ್ಕೆ ಭೇಟಿ ನೀಡಿದ ವಿದ್ಯಾರ್ಥಿಗಳು ವೈಜ್ಞಾನಿಕ ಮಾಹಿತಿ ಪಡೆದರು.

ಮುಖ್ಯ ಶಿಕ್ಷಕ ಕೆ.ಟಿ.ಅಶೋಕ್ ಕುಮಾರ್ ಮಾತನಾಡಿ, ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಯಲು ಇಂತಹ ಪ್ರವಾಸ ಅಗತ್ಯವಿದ್ದು ಸಾಮಾನ್ಯ ವಿಜ್ಞಾನದ ಅರಿವು ಮೂಡಿಸುವಲ್ಲಿ ಸಹಕಾರಿಯಾಗಲಿದೆ ಎಂದರು.

ಆಧುನಿಕತೆಯೊಂದಿಗೆ ಮುಂದುವರೆಯುತ್ತಿರುವ ಜಗತ್ತಿನಲ್ಲಿ ಏನೆಲ್ಲಾ ವಿಸ್ಮಯಗಳು ನಡೆಯುತ್ತಿದೆ. ಶೈಕ್ಷಣಿಕ ವ್ಯವಸ್ಥೆಯಲ್ಲಿ ಅದರ ಬಗೆಗಿನ ಮಾಹಿತಿ ಅಥವಾ ಪ್ರಾತ್ಯಕ್ಷಿತೆ ನೀಡುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಬದುಕಿನ ದಾರಿಯೂ ಸುಲಭವಾಗಿದೆ ಎಂದು ತಿಳಿಸಿದರು.

ಭಾರತೀಯರ ಅಂತರೀಕ್ಷಾ ಸಾಧನೆ, ನಕ್ಷತ್ರ ಮತ್ತು ಗ್ರಹಗಳ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸಲಾಯಿತು. ವಿದ್ಯಾರ್ಥಿಗಳು ಅಂತರಿಕ್ಷದ ಬಗ್ಗೆ ಹಾಗೂ ಇತರೆ ವೈಜ್ಞಾನಿಕ ಮಾಹಿತಿಗಳನ್ನು ಶಿಕ್ಷಕರಿಂದ ಕೇಳಿ ಪಡೆದುಕೊಂಡಿದ್ದು ವಿಶೇಷವಾಗಿತ್ತು.

ಸಹ ಶಿಕ್ಷಕರಾದ ಪಾರ್ವತಮ್ಮ, ಶಿವಕುಮಾರ್, ಸ್ವಾಮಿ, ಕೃಷ್ಣೇಗೌಡ, ಶಿವಗಂಗಯ್ಯ, ಪೂರ್ಣಿಮ ಹಾಗೂ ಇತರರು ಇದ್ದರು.

# ಇಂದು ಕುರುಕ್ಷೇತ್ರ ನಾಟಕ ಪ್ರದರ್ಶನ

ಹಾಸನ: ತಾಲ್ಲೂಕಿನ ಕಟ್ಟಾಯ ಹೋಬಳಿ ಮುಕುಂದೂರು ಗ್ರಾಮದಲ್ಲಿ ಶ್ರೀ ಗುರು ಮಲ್ಲೇಶ್ವರ ಮತ್ತು ಬಿಂದಿಗೆಮ ಜಾತ್ರೆ ಪ್ರಯುಕ್ತ ನ. 25ರ ಮಂಗಳವಾರ ರಾತ್ರಿ 8 ಗಂಟೆಗೆ ಶ್ರೀ ಮಲ್ಲೇಶ್ವರ ಕೃಪೋಷಿತ ನಾಟಕ ಮಂಡಳಿ ವತಿಯಿಂದ ಕುರುಕ್ಷೇತ್ರ ಅಥವಾ ಛಲದೋಳ್ ದುರ್ಯೋಧನ ಎಂಬ ಪೌರಾಣಿಕ ನಾಟಕ ಪ್ರದರ್ಶನ ಹಮಿಕೊಳ್ಳಲಾಗಿದೆ.

ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರೋತ್ಸಾಹಿಸಬೇಕೆಂದು ಮುಕುಂದೂರು, ಹೊಸಳ್ಳಿ, ಕುಂದೂರು, ಮಲ್ಲೇನಹಳ್ಳಿ ಗ್ರಾಮಸ್ಥರು ಕೋರಿದ್ದಾರೆ.

# ಹಿರಿಯರಿಗೆ ಗೌರವ ಕೊಡುವುದು ಎಲ್ಲರ ಕರ್ತವ್ಯ

## ಜಿಲ್ಲಾ ನ್ಯಾಯಾಧೀಶೆ ಹೇಮಲತಾ | ಕಾನೂನು ಅರಿವು ನೆರವು ಕಾರ್ಯಾಗಾರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹುಟ್ಟಿದ ಮನುಷ್ಯ ಯಾವಾಗ ಸಾಯುತ್ತಾನೆ ಎಂದು ಗೊತ್ತಿರುವುದಿಲ್ಲ. ಆದರೆ ಬದುಕಿದ್ದ ಸಂದರ್ಭದಲ್ಲಿ ನಾಗರಿಕರಿಗೆ ಎಷ್ಟು ಬೆಲೆ, ಗೌರವ ಕೊಡುತ್ತೇವೆ ಎನ್ನುವುದು ಮುಖ್ಯ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹೇಮಾವತಿ ಹೇಳಿದರು.

ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ, ಹಿರಿಯ ನಾಗರಿಕರ ಸ್ವಯಂ ಸೇವಾ ಸಂಸ್ಥೆಗಳು ವತಿಯಿಂದ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಅಟಲ್ ಅಭ್ಯುದಯ ಯೋಜನೆ ಕುರಿತು ಅಧಿಕಾರಿಗಳಿಗೆ ಸೋಮವಾರ ಆಯೋಜಿಸಿದ್ದ ಒಂದು ದಿನದ ಕಾರ್ಯಗಾರ ಉದ್ಘಾಟಿಸಿ ಮಾತನಾಡಿ, ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಸರ್ಕಾರದ ಯೋಜನೆಗಳನ್ನು ಜನಸಾಮಾನ್ಯರಿಗೆ ತ್ವರಿತವಾಗಿ ತಲುಪಿಸಲು ಕ್ರಮ ವಹಿಸುವಂತೆ ಸೂಚಿಸಿದರು.

ಹೆತ್ತು, ಹೊತ್ತು ಸಾಕಿ ಸಲುಹಿ ಜೀವನ ಕೊಟ್ಟು ಸಮಾಜಕ್ಕೆ ಉತ್ತಮ ಪ್ರಜೆಯನ್ನಾಗಿ ಮಾಡಿದ ತಂದೆ ತಾಯಿಗಳನ್ನು ಮಕ್ಕಳು ವೃದ್ಧಾಪ್ಯದಲ್ಲಿ ಸರಿಯಾಗಿ ನೋಡಿಕೊಳ್ಳದೆ ವೃದ್ಧಾಶ್ರಮಗಳಿಗೆ ಕಳುಹಿಸುತ್ತಿದ್ದಾರೆ.

ಅಧಿಕಾರಿಗಳು ತಮ್ಮ ಜವಾಬ್ದಾರಿ ಅರಿತು ಸಾರ್ವಜನಿಕರಿಗೆ ಸ್ಪಂದಿಸಿ ಸಾಮಾಜಿಕ ಕಳಕಳಿಯಿಂದ ಚಿಂತಿಸಿ ಕರ್ತವ್ಯ ನಿರ್ವಹಿಸುವ ಮೂಲಕ ನಾಗರಿಕರಿಗೆ ಸರ್ಕಾರದ ಸವಲತ್ತುಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ನಿಗಾವಹಿಸಿ ಎಂದು ತಿಳಿಸಿದರು.

ನಾಗರಿಕರ ಹಕ್ಕುಗಳ ಸಂರಕ್ಷಣೆ ಕಾಯ್ದೆ 2007ರ ಬಗ್ಗೆ ಗಮನ ಹರಿಸಿ ತುಳಿತಕ್ಕೆ ಒಳಗಾದವರಿಗೆ ಶೀಘ್ರವಾಗಿ ಪರಿಹಾರ ದೊರಕಿಸಲು ಕ್ರಮವಹಿಸುವಂತೆ ತಿಳಿಸಿದರು.

### ಅಧಿಕಾರಿಗಳ ಕರ್ತವ್ಯ ಹೆಚ್ಚಿದೆ:

ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಮಾತನಾಡಿ, ದೇಶದ ಸಾಮಾಜಿಕ ವ್ಯವಸ್ಥೆಯನ್ನು ಸದೃಢಗೊಳಿಸಲು ಹಿರಿಯ ನಾಗರಿಕರ ಹಕ್ಕುಗಳ ಸಂರಕ್ಷಣೆ ಕಾಯ್ದೆಯನ್ನು ಜಾರಿಗೊಳಿಸಲಾಗಿದೆ. ಆದರೆ ಆ ಕಾಯ್ದೆ ಪ್ರಯೋಜನವನ್ನು



ಎಷ್ಟು ಜನರು ಪಡೆಯುತ್ತಿದ್ದಾರೆ. ಈ ಕಾಯ್ದೆ ಬಗ್ಗೆ ಅಧಿಕಾರಿಗಳಿಗೆ ಎಷ್ಟು ಗೊತ್ತಿದೆ ಎನ್ನುವುದು ಪ್ರಶ್ನೆಯಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಹೆಚ್ಚಿನ ಗಮನಹರಿಸಿ ಹಿರಿಯ ನಾಗರಿಕರ ಹಕ್ಕುಗಳ ಸಂರಕ್ಷಣೆಗೆ ಒತ್ತು ನೀಡಿ, ಒಂದು ತಂಡವಾಗಿ ಕರ್ತವ್ಯ ನಿರ್ವಹಿಸಬೇಕು ಎಂದರು.

ನಾಗರಿಕರ ಕಷ್ಟಗಳನ್ನುಅರ್ಥ ಮಾಡಿಕೊಳ್ಳುವ ತಾಳ್ಮೆಯಿರಬೇಕು. ನಿಮಗೆ ಅನೇಕ ದೂರುಗಳು ಬರುತ್ತವೆ ಅವುಗಳಿಗೆ ಕಾನೂನಾತ್ಮಕವಾಗಿಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಅಧಿಕಾರಿಗಳು ಈ ಕಾಯ್ದೆ ಬಗ್ಗೆ ತಿಳಿದುಕೊಳ್ಳುವ ಅಗತ್ಯವಿದೆ ಅನುಷ್ಠಾನ ಮಾಡುವಾಗ ಬರುವ ಸವಾಲುಗಳನ್ನುಹೇಗೆ ನಿರ್ವಹಿಸಬೇಕು ಎಂಬುದರ ಕುರಿತು ವಿಶ್ಲೇಷಣೆ ಮಾಡಿ ಮುಂದುವರೆಯಬೇಕು ಎಂದರು.

ವೃದ್ಧಾಪ್ಯ ಜೀವನದಲ್ಲಿ ಒಂದು ಹಂತ. ಮುಂದೆ ನಾವು ನಿವೆಲ್ಲಾ ಆ ಹಂತವನ್ನು ತಲುಪಲೇಬೇಕು. ಹಿರಿಯರ ಆರೋಗ್ಯ ಹಾಗೂ ಕಾನೂನಾತ್ಮಕ ಸಮಸ್ಯೆಗಳನ್ನು ಬಗೆಹರಿಸಲು ಈ ಕಾಯ್ದೆ ಹಿರಿಯರಿಗೆ ಸಂಜೀವಿನಿಯಾಗಿದೆ ಎಂದು ತಿಳಿಸಿದರು.

ಸಮಾಜದ ಸ್ವಾಸ್ಥ್ಯ ಕಾಪಾಡಲು ಈ ಕಾಯ್ದೆ ಅನಿವಾರ್ಯ ಹಿರಿಯರು ಕುಟುಂಬದ ಕಳಶವಿದ್ದಂತೆ. ಅವರ ಆಸ್ತಿ, ಆರೋಗ್ಯ, ಜೀವರಕ್ಷಣೆ ಈ ಕಾಯ್ದೆ ಮೂಲಕ ಆಗಬೇಕು ಎಂದರಲ್ಲದೆ, ಅವರ ಆಸ್ತಿ ಕಿತ್ತುಕೊಂಡು ಹೊರಹಾಕುವುದು ಅನಾಗರಿಕತೆ ಎಂದರು.

ಯಾವುದೇ ದೇಶದ ಪ್ರಗತಿಯಲ್ಲಿ ದುರ್ಬಲ ವರ್ಗದವರನ್ನುಜೊತೆಯಾಗಿ ಸೇರಿಸಿಕೊಂಡು ಸಮಾಜಮುಖಿಯಾಗಿ ಮುಂದುವರೆಯುವ ಮೂಲಕ ಅಭಿವೃದ್ಧಿ ಕಾಣಬೇಕು. ಹಿರಿಯರು ಸಮಾಜದ ಅವಿಭಾಜ್ಯ ಅಂಗ ಅವರ ಹಿತಕಾಯುವುದು ಪ್ರತಿಯೊಬ್ಬರ ಕರ್ತವ್ಯ ಎಂದರು.

5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹೆಚ್.ಆರ್. ರವಿಕುಮಾರ್, ನಿರ್ವಹಣಾ ನ್ಯಾಯ ಮಂಡಳಿಯ ಪ್ರಕ್ರಿಯೆ, ಅಧಿಕಾರಿಗಳು ವಿಳಂಬ ಮತ್ತು ಸವಾಲುಗಳು ತ್ವರಿತ ಮತ್ತು ನ್ಯಾಯಯುತ ಪರಿಹಾರಗಳ ಕುರಿತು ಉಪನ್ಯಾಸ ನೀಡಿ, ಪ್ರತಿಯೊಬ್ಬರಿಗೂ ಸ್ವತಂತ್ರಯುತವಾಗಿ ನಿರ್ಭೀತಿಯಿಂದ ಜೀವನ ನಡೆಸುವ ಅವಕಾಶವಿದೆ. ಹಿರಿಯ ನಾಗರಿಕರ ಸಂರಕ್ಷಣೆಗಾಗಿ 2007 ರಲ್ಲಿ ಕಾಯ್ದೆ ಜಾರಿಗೆ ತರಲಾಗಿದೆ. ತಂದೆ-ತಾಯಿ ಜೀವನ ನಡೆಸಲು ಯಾವುದೇ ವರಮಾನ ಇಲ್ಲದಿದ್ದ ಸಂದರ್ಭದಲ್ಲಿ ಮಕ್ಕಳಿಂದ ಜೀವಾನಾಂಶ ಪಡೆಯಲು ಅವಕಾಶವಿದೆ ಎಂದರು.

ತಂದೆ-ತಾಯಿ ಅವರು ವಾಸ ಮಾಡುತ್ತಿರುವ ವ್ಯಾಪ್ತಿಯಲ್ಲಿ ಉಪ ವಿಭಾಗಾಧಿಕಾರಿಗೆ ಜೀವನಾಂಶ ಕೋರಿ ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಮಕ್ಕಳಿಗೆ ನೋಟಿಸ್ ನೀಡಿ, 90 ದಿನಗಳಲ್ಲಿ ಪ್ರಕರಣ ಇತ್ಯರ್ಥಪಡಿಸಬೇಕು. ಆದಾಯದ ಮೂಲ ಅನುಸರಿಸಿ ಜೀವನಾಂಶಕ್ಕೆ ಆದೇಶ ನೀಡಬೇಕು ಎಂದು ಹೇಳಿದರು.

### ಸ್ವಯಂ ಪ್ರೇರಿತ ದೂರು ದಾಖಲಿಸಿ:


ನಿಗದಿತ ಕಾಲಾವಧಿಯಲ್ಲಿ ಪ್ರಕರಣಗಳು ಇತ್ಯರ್ಥಗೊಳ್ಳದೆ ಸಮಯ ಹಿಡಿಯುವುದರಿಂದ ಅವರ ಜೀವನ ನಡೆಸಲು ಅನುಕೂಲವಾಗುವಂತೆ ಮಧ್ಯಂತರ ಜೀವನಾಂಶಕ್ಕೆ ಆದೇಶ ಮಾಡಬೇಕು. 30 ದಿನದೊಳಗೆ ಹಣವನ್ನುಠೇವಣಿ ಇಡಬೇಕು ಎಂದು ತಿಳಿಸಿದರು.

ತಂದೆ-ತಾಯಿ ಮತ್ತು ಮಕ್ಕಳ ಬಾಂಧವ್ಯ ಬೆಸೆಯಲು ಸಂಧಾನ ಮಾಡಲು ಪ್ರಯತ್ನಿಸಬೇಕು. ದಿನ ಪತ್ರಿಕೆಗಳಲ್ಲಿ ಪ್ರಕಟವಾಗಿರುವ ಸುದ್ದಿಯನ್ನಾಧಾರಿಸಿ ಉಪ ವಿಭಾಗಾಧಿಕಾರಿ ಸ್ವಯಂ ಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಳ್ಳಲು ಅವಕಾಶವಿದೆ ಎಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ವಿಕಲಚೇತನ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಅಧಿಕಾರಿ ಕೆ.ಆರ್.ಅನುಪಮ ಮತ್ತಿತರರು ಉಪಸ್ಥಿತರಿದ್ದರು.

# ಸಮಾನತೆ ಸಂದೇಶ ಸಾರಿದ ಕನಕದಾಸರು: ಸಂಸದ ಶ್ರೇಯಸ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಸೀಕೆರೆ: ಕನಕದಾಸರು ಸಮಾಜ ಜಾಗೃತಿ, ಸಮಾನತೆ ಮತ್ತು ನೈತಿಕ ಮೌಲ್ಯಗಳನ್ನು ಬಿತ್ತಿದ ಶ್ರೇಷ್ಠ ದಾರ್ಶನಿಕರು ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು.

ನಗರದ ಹಳೇ ಸರ್ಕಾರಿ ಮಾಧ್ಯಮಿಕ ಶಾಲಾ ಆವರಣದಲ್ಲಿ ಭಾನುವಾರ ನಡೆದ ಭಕ್ತ ಕನಕದಾಸರ 538ನೇ ಅದ್ದೂರಿ ಜಯಂತಿ ಮತ್ತು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ಕಂಚಿನ ಪುತ್ಥಳಿ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಸಮಾಜಕ್ಕೆ ಕನಕದಾಸರು ಮತ್ತು ಸಂಗೊಳ್ಳಿ ರಾಯಣ್ಣ ಕೊಡುಗೆ ಹೆಚ್ಚಿದೆ. ಕನಕದಾಸರ ಆದರ್ಶಗಳು ನಮ್ಮನ್ನು ಸನ್ಮಾರ್ಗದತ್ತ ದಾರಿ ದೀಪದಂತೆ ನಡೆಸುತ್ತಿವೆ. ಅವರ ತತ್ವಾದರ್ಶಗಳನ್ನು ಪಾಲಿಸುವುದು ನಮ್ಮೆಲ್ಲರ ಕರ್ತವ್ಯ ಎಂದರು. ಬ್ರಿಟಿಷರ ವಿರುದ್ಧ ಅಸಾಮಾನ್ಯ ಸಾಹಸ ಪ್ರದರ್ಶಿಸಿದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರ ಅಜರಾಮರ ಹೋರಾಟ ನಮ್ಮಲ್ಲಿ ಶೌರ್ಯ, ದೇಶಭಕ್ತಿ ಮತ್ತು ನಿಸ್ವಾರ್ಥ ಸೇವೆಯ ಸ್ಫೂರ್ತಿಯನ್ನು ತುಂಬುತ್ತದೆ. ಅವರ ತ್ಯಾಗ ಮತ್ತು ಬಲಿದಾನ ನಮ್ಮ ದೇಶಪ್ರೇಮದ ಪ್ರತೀಕ. ಇಬ್ಬರೂ ಮಹನೀಯರ ತತ್ವಾದರ್ಶಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಂಡು ಒಳ್ಳೆಯ ಬದುಕು ಕಟ್ಟಿಕೊಳ್ಳೋಣ ಎಂಬ ಆಶಯ ವ್ಯಕ್ತಪಡಿಸಿದರು.

ಶಾಸಕ ಕೆ.ಎಂ.ಶಿವಲಿಂಗೇಗೌಡ ಮಾತನಾಡಿ, ಮಹನೀಯರ ಜಯಂತಿ ಕಾರ್ಯಕ್ರಮಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಮಾನತೆ ತರುವಲ್ಲಿ ಪ್ರತಿ ಸಮಾಜಕ್ಕೂ ನಿಗಮ ಮಂಡಳಿ ಸ್ಥಾಪನೆ ಮಾಡಿ ಆಚರಿಸುತ್ತಿರುವಂತೆ ಮಾಡಿದ್ದಾರೆ. ಅಲ್ಲದೇ ಅದರಿಂದ ಸಮಾಜದ ಸಂಘಟನೆಗೆ ಸಹಕಾರಿಯಾಗಿದೆ. ಬಸವಣ್ಣನವರು ಜಾತಿಯತೆಯ ಮನೋಭಾವನೆಯಿಂದ ಹೊರ ತರಲು ಶ್ರಮಿಸಿದರು. ಅವರ ಸಾಲಿನಲ್ಲೇ 16ನೇ ಶತಮಾನದಲ್ಲಿ ಕನಕದಾಸರು ಕುಲ ಕುಲವೆಂದು ಹೊಡೆದಾಡದಿರಿ ಎಂದು ಸಾರುತ್ತ ಮನುಕುಲವನ್ನು ಎಚ್ಚರಿಸುವ ಮೂಲಕ ಮೇಲು ಕೀಳು ಭಾವನೆಯನ್ನು ತೊಡೆದು ಹಾಕಲು ಶ್ರಮಿಸಿದರು.

ಕನಕದಾಸರ ರೀತಿ ಹಾಲುಮತ ಸಮಾಜದಲ್ಲಿ ಹುಟ್ಟಿರುವ ಸಿದ್ದರಾಮಯ್ಯನವರು ದಾರ್ಶನಿಕ ವ್ಯಕ್ತಿಯಾಗಿ ಆಧುನಿಕ ಬಸವಣ್ಣನವರಂತೆ ಎಲ್ಲಾ ಸಮಾಜದ ಏಳಿಗೆಗೆ ರಾಜ್ಯದ ಮುಖ್ಯಮಂತ್ರಿಯಾಗಿ ಶ್ರಮಿಸುತ್ತಿದ್ದಾರೆ. ಅದೇ ರೀತಿ ಕ್ಷೇತ್ರದಲ್ಲಿ ಎಲ್ಲಾ ದಾರ್ಶನಿಕರ ಪುತ್ಥಳಿಗಳನ್ನು ನಿರ್ಮಾಣ ಮಾಡಿಕೊಡಲಾಗುತ್ತಿದೆ ಎಂದರು.

ಭವ್ಯ ಸಮುದಾಯ ಭವನ: ನಗರ ಪ್ರದೇಶದಲ್ಲಿ ಕುರುಬ ಸಮುದಾಯ ಭವನ ನಿರ್ಮಾಣ ಮಾಡಲು ಹೆಂಜಗೊಂಡನಹಳ್ಳಿ ಪ್ರದೇಶದಲ್ಲಿ ನಿವೇಶನ ಕೊಡಿಸಿ ಕಟ್ಟಡ ನಿರ್ಮಾಣಕ್ಕೆ ಒತ್ತು ನೀಡಲಾಗುವುದೆಂದರು.

ಹುಡಾ ಅಧ್ಯಕ್ಷ ಪಟೇಲ್ ಶಿವಪ್ಪ ಮಾತನಾಡಿ, ಮಾನ ಅಪಮಾನಗಳನ್ನು ಸಹಿಸಿಕೊಂಡು ಸಮಾಜವನ್ನು ಒಳಿತಿನೆಡೆಗೆ ಸಾಗಿಸಿದರುವ ಕನಕದಾಸರು. ತಳವರ್ಗವನ್ನು ಮೇಲೆತ್ತುವ ಕಾರ್ಯಕ್ಕೆ ಹೋರಾಟ ಮಾಡಿದವರು. ಕಲ್ಯಾಣ ಕಾರ್ಯಕ್ರಮದ ಸಂತ ಬಸವಣ್ಣ ಅವರ ಹಾದಿಯಲ್ಲಿ ಸಾಗಿದ ಕನಕದಾಸರು ನಾಡಿಗೆ ಒಳಿತನ್ನು ನೀಡಿದ್ದಾರೆ ಎಂದರು.

ತಹಶೀಲ್ದಾರ್ ಸಂತೋಷಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ ಮೋಹನ್ ಕುಮಾರ್, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಬಿಳಿಚೌಡಯ್ಯ, ನಗರಸಭೆ ಮಾಜಿ ಅಧ್ಯಕ್ಷ ಎಂ.ಸಮೀವುಲ್ಲಾ, ಮಾಜಿ ಉಪಾಧ್ಯಕ್ಷ ಮನೋಹರ್, ಕುರುಬ ಸಮಾಜದ ತಾಲ್ಲೂಕು ಅಧ್ಯಕ್ಷ ತೊಂಡಿಗನಹಳ್ಳಿ ಕೃಷ್ಣಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಾಣಾವರ ಶ್ರೀನಿವಾಸ್, ಮಂಗಳಾಪುರ ನಾಗರಾಜು, ಹುಚ್ಚೇಗೌಡ, ಗ್ಯಾರಂಟಿ ಯೋಜನೆ ತಾಲ್ಲೂಕು ಅಧ್ಯಕ್ಷ ಗೀಜೀಹಳ್ಳಿ ಧರ್ಮಶೇಖರ್, ಅಹಲ್ಯಬಾಯಿ ಹೋಲ್ಕರ್ ಸಂಘದ ಯಶೋಧಮ್ಮ, ಕನಕ ನೌಕರರ ಸಂಘದ ಅಧ್ಯಕ್ಷ ಗುತ್ತಿನಕೆರೆ ಬಸವರಾಜು, ಸಂಗೊಳ್ಳಿ ರಾಯಣ್ಣ ಬ್ಯಾಂಕ್ ಅಧ್ಯಕ್ಷೆ ಶೃತಿ ಮನು ಇತರರಿದ್ದರು.

## ಸಮ ಸಮಾಜಕ್ಕೆ ಶ್ರಮಿಸಿದ ಕನಕದಾಸರು

ಸಮಸಮಾನತೆಯ ನಿರ್ಮಾಣಕ್ಕಾಗಿ ನಾಡಿನಲ್ಲಿ ಹಲವು ವಿಶ್ವ ಮಾನವರು ಜನ್ಮ ತಾಳಿ ಎಲ್ಲರಿಗೂ ದಾರಿದೀಪವಾಗಿದ್ದು ಅವರ ಆದರ್ಶಗಳ ಅಡಿಯಲ್ಲಿ ಸಾಗಿಸಬೇಕಿದೆಯೆಂದು ಕೆ.ಆರ್. ನಗರ ಕಾಗಿನೆಲೆ ಮಹಾಸಂಸ್ಥಾನ ಮಠದ ಡಾ. ಶಿವಾನಂದಪುರಿ ಸ್ವಾಮೀಜಿ ಹೇಳಿದರು.

ಕನಕದಾಸರು ಬಡವ ಶ್ರೀಮತರ ನಡುವಿನ ಅಂತರ ತೊಡೆದು ಹಾಕಲು ಶ್ರಮಿಸಿದರು. ಜಾತಿ ವ್ಯವಸ್ಥೆಯ ವಿರುದ್ಧ ತಮ್ಮ ವಚನಗಳ ಮೂಲಕ ತೊಡೆದು ಹಾಕಲು ಶ್ರಮಿಸಿದ ಮಹಾನ್ ವ್ಯಕ್ತಿ ಎಂದರು.

## ಯುನೈಟೆಡ್ ಶಾಲೆಯಲ್ಲಿ ಮಕ್ಕಳ ದಿನಾಚರಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಯುನೈಟೆಡ್ ಅಕಾಡೆಮಿ ಶಾಲೆಯಲ್ಲಿ ಮಕ್ಕಳಿಗೆ ವೇಷ ಭೂಷಣ ಸ್ಪರ್ಧೆ ಆಯೋಜನೆ ಮೂಲಕ ಮಕ್ಕಳ ದಿನ ಆಚರಿಸಲಾಯಿತು.

ಭಾರತದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಜನ್ಮದಿನದ ಸ್ಮರಣಾರ್ಥ ನಡೆದ ಈ ಕಾರ್ಯಕ್ರಮದಲ್ಲಿ ಪುಟ್ಟ ವಿದ್ಯಾರ್ಥಿಗಳು ವಿವಿಧ ವೇಷಭೂಷಣದೊಂದಿಗೆ ಗಮನ ಸೆಳೆದರು.


ಸ್ವಾತಂತ್ರ್ಯ ಹೋರಾಟಗಾರರ ವೇಷ ಧರಿಸಿ ದೇಶಾಭಿಮಾನ ಮೆರೆದರೆ ಗುಳಿಗ ದೈವ, ಪಾಂಡುರಂಗ, ವೆಂಕಟೇಶ, ಬುದ್ದ ಇತ್ಯಾದಿಗಳ ವೇಷಭೂಷಣ ಧರಿಸಿ ಭಕ್ತಿ ಮೆರುಗು ತಂದರು. ಹಾಗೆಯೇ ವಿಶೇಷವಾಗಿ ಪ್ರಾಣಿ ಪಕ್ಷಿ, ಮರ, ರೈತರು ಮತ್ತು ಭೂಮಿಯ ರೂಪದಲ್ಲಿ ಬಂದು ಪರಿಸರ ಸಂರಕ್ಷಣೆ ಕುರಿತು ಸಂದೇಶ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಸಂಸ್ಥೆಯ ಖಜಾಂಚಿ ಸಿ.ಹೆಚ್.ಲೋಕೇಶ್ ಮಾತನಾಡಿ, ಇಂದಿನ ಮಕ್ಕಳೇ ನಾಳಿನ ರಾಷ್ಟ್ರದ ರೂವಾರಿಗಳು. ಮಕ್ಕಳನ್ನು ದೇಶದ ಆಸ್ತಿಯನ್ನಾಗಿ ಮಾಡುವುದು ಬಹಳ ಮುಖ್ಯ. ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಒಳ್ಳೆಯ ಶಿಕ್ಷಣ ನೀಡುವುದು ಮಹತ್ವವಾದುದು. ಅವರನ್ನು ಉತ್ತಮವಾಗಿ ನೋಡಿಕೊಳ್ಳುವುದರ ಜೊತೆಗೆ ಅಗತ್ಯ ಶಿಕ್ಷಣವನ್ನು ಪೂರೈಸಬೇಕು ಎಂಬುದು ಸ್ವತಂತ್ರ ಭಾರತದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಅವರ ಧ್ಯೇಯವಾಗಿತ್ತು. ಅವರ ಜನ್ಮದಿನದ ನೆನಪಿಗೆ ಮಕ್ಕಳ ದಿನಾಚರಣೆಯನ್ನು ನಮ್ಮ ಶಾಲೆಯಲ್ಲಿ ಆಚರಿಸುತ್ತಿದ್ದೇವೆ. ಶಿಕ್ಷಣದ ಜೊತೆಗೆ ಈ ರೀತಿಯ ಮಕ್ಕಳ ಆಸೆಗಳಿಗನುಗುಣವಾಗಿ ನಮ್ಮ ಶಾಲೆಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುತ್ತೇವೆ. ಅದರಂತೆ ಮಕ್ಕಳಿಗೆ ಈ ವೇಷಭೂಷಣ ಸ್ಪರ್ಧೆ ನಡೆಸುತ್ತಿದ್ದೇವೆ ಎಂದರು.

ಕಾರ್ಯದರ್ಶಿ ಹೆಚ್.ಎಂ.ದಿನೇಶ್ ಮಾತನಾಡಿ, ಇಂತಹ ಸ್ಪರ್ಧೆಗಳು ಮಕ್ಕಳ ಸೃಜನಶೀಲತೆಯನ್ನು ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತವೆ. ಮಕ್ಕಳಲ್ಲಿ ಹೊಸ ಉತ್ಸಾಹ ಮೂಡಿಸುವುದರ ಜೊತೆಗೆ ನಮ್ಮ ಸಂಸ್ಕೃತಿ ಮತ್ತು ಇತಿಹಾಸದ ಬಗ್ಗೆ ತಿಳುವಳಿಕೆ ನೀಡುತ್ತದೆ. ಮಕ್ಕಳ ಆಸೆಗಳಿಗೆ ನೀರುಣಿಸಿ ಪೋಷಿಸಿ ಫಲವನ್ನು ಪಡೆಯಬೇಕಾದುದು ಪೋಷಕರ ಕರ್ತವ್ಯ ಎಂದರು.

ವೇಷಭೂಷಣ ಸ್ಪರ್ಧೆಯ ತೀರ್ಪುಗಾರರಾಗಿ ಶಿಕ್ಷಕರಾದ ಡಿ.ಎಂ. ರಂಗನಾಥ್, ಹೆಚ್.ಎಂ.ಪ್ರೀತಿ ಮತ್ತು ಭಾಗ್ಯ ಕಾರ್ಯನಿರ್ವಹಿಸಿದರು. ಮುಖ್ಯಶಿಕ್ಷಕಿ ಎಂ.ಎನ್.ದೀಪ, ಶಿಕ್ಷಕಿ ಅಸ್ಮಾ ಮತ್ತು ಸಿಬ್ಬಂದಿ ಹಾಜರಿದ್ದರು.

## ಬದುಕ ಗೆಲ್ಲಿಸು ಮನವೇ ಪ್ರೀತಿಯ ಸಂಕಲನ




ಡಿಜಿಟಲ್ ವ್ಯಸನದಿಂದ ಹೊರಕ್ಕೊಂದು ದಾರಿ ಕಾಣಿಸಿದೆ. ಬದುಕು ಗೆಲ್ಲುವ ಸಾಧ್ಯತೆಯನ್ನು ತೋರಿಸಿದವರ ಅನುಭವ ಸಾರವಿದೆ. ಸಾವು ಯಾವುದಕ್ಕೂ ಪರಿಹಾರವಲ್ಲ. ವ್ಯಕ್ತಿ ಸತ್ತರೂ ಸಮಸ್ಯೆಗಳು ಸಾಯುವುದಿಲ್ಲ. ಪರಿಹಾರದ ಆದಿ ಸರಳವಿದೆ.

ಜೀವನ ಕೌಶಲದ ನಿಜ ಬದುಕಿನ ಭರವಸೆಯ ಕತೆಗಳು ಇಲ್ಲಿವೆ. ಜೀವನೋತ್ಸಾಹ ಮತ್ತು ಪ್ರೇರಣೆ ಬದುಕು ಒಂದು ಮುಗಿಯದ ಪಯಣ. ಅಲ್ಲಿ ಸೋಲು ನೋವುಗಳು ಸಹಜ. ಆದರೆ ಸೋಲಿಗಿಂತ ಗೆಲುವು ಮುಖ್ಯ ಕಷ್ಟಗಳನ್ನು ಎದುರಿಸಿ ಮುನ್ನಡೆಯಬೇಕು ಎಂಬ ಧೈರ್ಯ ಮತ್ತು ಆತ್ಮವಿಶ್ವಾಸವನ್ನು ತುಂಬುವುದು ಈ ಕೃತಿಯ ಮುಖ್ಯ ಉದ್ದೇಶ.

ಬದುಕಿನ ಹಲವು ಮುಖಗಳು ಈ ಸಂಕಲನದಲ್ಲಿನ ಪ್ರತಿಯೊಂದು ಲೇಖನವೂ ಬದುಕಿನ ವಿವಿಧ ಆಯಾಮಗಳನ್ನು ಪರಿಚಯಿಸುತ್ತದೆ. ಬರುವ ಅಪಮಾನ ನಿರಾಶೆ ವೈಫಲ್ಯಗಳನ್ನು ಹೇಗೆ ದಿಟ್ಟತನದಿಂದ ಎದುರಿಸಿ ಮತ್ತೆ ಪ್ರಾರಂಭಿಸಬಲ್ಲ ಛಲವನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸುತ್ತದೆ. ನೈಜ ಕಥೆಗಳು ಲೇಖಕಿಯರು ಅನೇಕ ನೈಜ ಘಟನೆಗಳು ಜೀವನದ ಸವಾಲುಗಳನ್ನು ಎದುರಿಸಿ ಗೆದ್ದ ಸಾಧಕರ ಕಥೆಗಳ ಮೂಲಕ ತಮ್ಮ ವಿಚಾರಗಳನ್ನು ಮುಂದಟ್ಟು ಮಾಡಿಕೊಡುತ್ತಾರೆ.

### ಸರಣಿಯ ಕೆಲವು ಪ್ರಮುಖ ಕೃತಿಗಳು

1. ಬದುಕು ಬದಲಿಸಬಹುದು 2. ಸಾವೇ, ಬರುವುದಿದ್ದರೆ ನಾಳೆ ಬಾ! 3. ಸೋಲೆಂಬುದು ಅಲ್ಪವಿರಾಮ 4. ಸಂತಸ ನನ್ನೆದೆಯ ಹಾಡು ಹಕ್ಕಿ 5.ಬದುಕು ಗೆಲ್ಲಿಸು ಮನವೇ

ಈ ಕೃತಿಯ ಲೇಖಕಿ ನೇಮಿಚಂದ್ರ ಕಥೆಗಾರ್ತಿಯಾಗಿ, ಅಂಕಣಕಾರ್ತಿಯಾಗಿ ಪರಿಚಿತರು. ಬರಹದಲ್ಲಿ ವಿಶಿಷ್ಟ ಶೈಲಿಯನ್ನು ರೂಢಿಸಿಕೊಂಡವರು. ಸಮಾಜದ ಬಗ್ಗೆ, ಮಾನಸಿಕ ಸ್ವಾಸ್ಥ್ಯದ ಬಗ್ಗೆ ಮಹಿಳೆಯರ ಬಗ್ಗೆ ವಿಶೇಷ ಕಳಕಳಿ ಉಳ್ಳವರು. ಪ್ರವಾಸಕ್ತ ಸಾಹಸಿ. ಪೆರುವಿನ ಪವಿತ್ರ ಕಣಿವೆಯಲ್ಲಿ, ಯಾದ್ ವಶೇಮ್, ಭಾವೇಶ್ ಭಾಟಿಯ, ನೋವಿಗದ್ದಿದ ಕುಂಚ, ಮಹಿಳಾ ವಿಜ್ಞಾನಿಗಳು, ಮುಂತಾದ ಕೃತಿಗಳು ಪ್ರಕಟವಾಗಿವೆ. ವೃತ್ತಿಯಿಂದ ಇಂಜಿನಿಯರ್ ಆಗಿ ನಿವೃತ್ತರಾದವರು. ನೇಮಿಚಂದ್ರ ಅವರ ಇದಕ್ಕಿಂತ ಹಿಂದಿನ ನಾಲ್ಕು ಕೃತಿಗಳು ಅನೇಕ ಬಾರಿ ಮರುಮುದ್ರಣಗೊಂಡು ಅತ್ಯಂತ ಜನಪ್ರಿಯವಾಗಿ ಜನರ ಬದುಕಿಗೆ ಭರವಸೆಯ ಬೆಳಕಾಗಿವೆ. ಈ ಕೃತಿಯನ್ನು ಕನ್ನಡ ನಾಡಿನ ಹೆಮ್ಮೆಯ ಪ್ರಕಾಶನ ಸಂಸ್ಥೆಯಾದ ನವ ಕರ್ನಾಟಕ ಪ್ರಕಾಶನ ಪ್ರಕಟಿಸಿದೆ. ಕೃತಿಯು 280 ಪುಟಗಳನ್ನು ಹೊಂದಿದ್ದು 325 ರೂ. ಮುಖಬೆಲೆ ಹೊಂದಿದೆ. ಪ್ರತಿಯೊಬ್ಬರ ಮನೆಯಲ್ಲಿ ಇರಬೇಕಾದ ಈ ಕೃತಿಯು ರವೀಂದ್ರ ಪುಸ್ತಕಾಲಯ, ಚಾಮರಾಜಪೇಟೆ, ಸಾಗರ ಇಲ್ಲಿ ರಿಯಾಯಿತಿ ದರದಲ್ಲಿ ದೊರಕುತ್ತದೆ.

**- ರಜನೀಶ್ ಸಾಗರ**

## ಅಂಬೇಡ್ಕರ್ ಮಾದರಿಯ ಹೋರಾಟ ರೂಪಿಸಲು ಸಲಹೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಕಲಗೂಡು: ಇಂದಿನ ಯುವಕರು ಹಿರಿಯ ಹೋರಾಟಗಾರರ ತ್ಯಾಗ ಬಲಿದಾನವನ್ನು ಅರಿತು ಅವರ ಮಾರ್ಗದರ್ಶನದಲ್ಲಿ ಹೋರಾಟಗಳನ್ನು ರೂಪಿಸಿಕೊಂಡು ನೊಂದವರಿಗೆ ನ್ಯಾಯ ಕೊಡಿಸುವ ಕೆಲಸ ಮಾಡಬೇಕು ಎಂದು ಮಾಜಿ ಸಚಿವ ಎ.ಮಂಜು ಸಲಹೆ ನೀಡಿದರು.

ರಾಮನಾಥಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಿಳಗುಲಿ ಗ್ರಾಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಯುವಕರ ಸಂಘದಿಂದ ಹಮ್ಮಿಕೊಂಡಿದ್ದ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿ ಅನಾವರಣ ಸಮಾರಂಭದಲ್ಲಿ ಮಾತನಾಡಿ, ಅಂಬೇಡ್ಕರ್ ಹಾಕಿಕೊಟ್ಟ ಆದರ್ಶಗಳನ್ನು ಅಳವಡಿಸಿಕೊಂಡು ನಡೆಯಬೇಕು ಎಂದರು.

ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಕೆ.ಎಂ.ಜಾನಕಿ ಮಾತನಾಡಿ, ನಮ್ಮ ಸಂಘಟನೆ ಡಾ. ಬಿ.ಆರ್. ಅಂಬೇಡ್ಕರ್ ಅವರ ತತ್ವಾದರ್ಶಕ್ಕೆ ಕಳಂಕ ಆಗದಂತೆ ಉತ್ತಮ ಮಾರ್ಗದರ್ಶನದಲ್ಲಿ ನಡೆಯಬೇಕೆಂದರು.

ಮೈಸೂರು ಅಕಾಡೆಮಿ ಐ.ಎಸ್. ಶಿವಕುಮಾರ್ ಮಾತನಾಡಿ, ಇಂದಿನ ವಿದ್ಯಾರ್ಥಿಗಳು ಅರಿವು ಸಂಸ್ಕಾರದ ಸತ್ವ, ಶಿಕ್ಷಣದ ಮಹತ್ವವನ್ನು ಪರಿಪೂರ್ಣವಾಗಿ ಅರಿತು ಸಾಗಿದರೆ ಮಾತ್ರ ಸತ್ಪ್ರಜೆಗಳಾಗಿ ಬೆಳೆಯಬಹುದು ಮತ್ತು ನಿತ್ಯ ಕನಿಷ್ಠ ಐದು ಗಂಟೆಗಳ ಕಾಲ ಮನೆಯಲ್ಲಿ ಓದುವ ಹವ್ಯಾಸ ರೂಢಿಸಿಕೊಂಡು ಡಾ. ಅಂಬೇಡ್ಕರ್ ಅವರು ಹಾಕಿಕೊಟ್ಟ ಸಂವಿಧಾನವನ್ನು ಉಳಿಸುವ ಹಾಗು ರಕ್ಷಿಸುವ ಕೆಲಸ ಮಾಡಬೇಕೆಂದು ತಿಳಿಸಿದರು.

ಕೆಎಎಸ್ ಹಿರಿಯ ಶ್ರೇಣಿ ಅಧಿಕಾರಿ ಬಿ.ಆರ್.ಮಹೇಶ್, ಜಿಲ್ಲಾ ವಾಣಿಜ್ಯ ತೆರಿಗೆ ಇಲಾಖೆ ಸಹಾಯಕ ಆಯುಕ್ತ ಎಂ.ಬಿ.ಚನ್ನಕೇಶವ, ತಹಶೀಲ್ದಾರ್ ಗ್ರೇಡ್ 2 ಸಿ.ಸ್ವಾಮಿ, ವಿಷ್ಣುಪ್ರಕಾಶ್, ಈರೇಶ್ ಹಿರೇಹಳ್ಳಿ, ಬಿಎಸ್‌ಪಿ ರಾಜ್ಯ ಕಾರ್ಯದರ್ಶಿ ಹರೀಶ್ ಅತ್ನಿ, ಗ್ರಾಮ ಪಂಚಾಯಿತಿ ಅಧ್ಯಕ್ಷ ಪವನಕುಮಾರ್, ಉಪಾಧ್ಯಕ್ಷ ಸಿದ್ದರಾಜು, ಮಾಜಿ ಉಪಾಧ್ಯಕ್ಷ ಮಾದೇಶ್, ಸದಸ್ಯರಾದ ವರದಮ್ಮ, ಮಹದೇಶ್, ಮೋಹನ್ ಇತರರಿದ್ದರು.

## ಆಲದಹಳ್ಳಿ ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಚಾಲನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ದಶಕಗಳಿಂದ ನನೆಗುದಿಗೆ ಬಿದ್ದಿದ್ದ ರಸ್ತೆಗೆ ಯಗಚಿ ಯೋಜನೆ ಅನುದಾನದಲ್ಲಿ ಅಭಿವೃದ್ಧಿ ಪಡಿಸುತ್ತಿದ್ದು ಭಾಗದ ಜನರಿಗೆ ಅನುಕೂಲವಾಗಲಿದೆಯೆಂದು ಎಂದು ಶಾಸಕ ಹೆಚ್.ಕೆ.ಸುರೇಶ್ ಹೇಳಿದರು.

ತಾಲ್ಲೂಕಿನ ಆಲದಹಳ್ಳಿ ಗ್ರಾಮದಲ್ಲಿ ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಸಿ ಮಾತನಾಡಿ, ಆಲದಹಳ್ಳಿ ಗ್ರಾಮದಿಂದ ಶಿವಪುರಕ್ಕೆ ಸುಮಾರು 690 ಮೀಟರ್ ರಸ್ತೆ 60 ಮೀಟರ್ ಚರಂಡಿ ನಿರ್ಮಾಣ ಮಾಡಿ ಅನುಕೂಲ ಮಾಡಿಕೊಡಲಾಗುವುದು. ಉತ್ತಮ ದರ್ಜೆಯ ರಸ್ತೆ ಕಾಮಗಾರಿ ಮಾಡಬೇಕು ಎಂದು ಗುತ್ತಿಗೆದಾರರಿಗೆ ಇದೇ ವೇಳೆ ತಾಕೀತು ಮಾಡಿದರು.

ತಾಲ್ಲೂಕು ಬಿಜೆಪಿ ಮಂಡಲ ಮಾಜಿ ಅಧ್ಯಕ್ಷ ಅಡಗೂರು ಆನಂದ್, ಇಂಜಿನಿಯರ್ ರಾಮಕೃಷ್ಣ, ಗ್ರಾಮಸ್ಥರಾದ, ಕೃಷ್ಣೇಗೌಡ, ಮಂಜುನಾಥ್, ರಘು, ಮೋಹನ್, ದೊಡ್ಡೇಗೌಡ, ಕೃಷ್ಣೇಗೌಡ, ಗಂಗಮ್ಮ ಇತರರಿದ್ದರು.

## ಮಕ್ಕಳ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸಿ: ರವಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಕ್ಕಳನ್ನು ಕೇವಲ ಪುಸ್ತಕ ಓದುವ ಯಂತ್ರಗಳನ್ನಾಗಿಸದೆ ಅವರಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸವಾಗಬೇಕೆಂದು ಜಿಲ್ಲಾ ಚಿತ್ರಕಲಾ ಶಿಕ್ಷಕರ ಸಂಘದ ಅಧ್ಯಕ್ಷ ವೈ.ಬಿ.ರವಿ ಹೇಳಿದರು.

ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಭಾನುವಾರ ಜಿಲ್ಲಾ ಚಿತ್ರಕಲಾ ಶಿಕ್ಷಕರ ಸಂಘ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಚಿತ್ರಕಲಾ ಶಿಕ್ಷಕರ 15ನೇ ಶೈಕ್ಷಣಿಕ ಸಮ್ಮೇಳನ ಅಂಗವಾಗಿ ಭಾನುವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಚಿತ್ರಕಲಾ ಸ್ಪರ್ಧೆಯಲ್ಲಿ ಮಾತನಾಡಿ, ಮಕ್ಕಳು ಸಂಗೀತ, ರಂಗಭೂಮಿ, ಚಿತ್ರಕಲೆ, ಸಾಹಿತ್ಯ, ಕ್ರೀಡೆ, ಭಾಷಣ ಹೀಗೆ ನಾನಾ ಕ್ಷೇತ್ರಗಳಲ್ಲಿ ಆಸಕ್ತಿ ಹೊಂದಿರುತ್ತದೆ. ಆದರೆ ಪೋಷಕರು ಅಂಕಗಳಿಕೆಗಷ್ಟೇ ಮಕ್ಕಳನ್ನು ಸೀಮಿತಗೊಳಿಸುತ್ತಾರೆ. ಈ ಬೆಳವಣಿಗೆ ಮಕ್ಕಳ ವ್ಯಕ್ತಿತ್ವ ವಿಕಸನದ ಮೇಲೆ ಪರಿಣಾಮ ಬೀರುತ್ತದೆ.

ಮಕ್ಕಳಿಗೆ ಶೈಕ್ಷಣಿಕ ಹಾಗು ಸಾಂಸ್ಕೃತಿಕ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಚಿತ್ರಕಲಾ ಸ್ಪರ್ಧೆ ಆಯೋಜಿಸಲಾಗಿದೆ ಎಂದರು.

## ಇತಿಹಾಸದಲ್ಲಿ ಈ ದಿನ

### ನವೆಂಬರ್-25

1867: ಸ್ವೀಡನ್‌ನ ಆವಿಷ್ಕಾರಕ ಅಲ್ಫ್ರೆಡ್ ನೋಬೆಲ್ ಡೈನಮೈಟ್‌ಗೆ ಪೇಟೆಂಟ್ ಪಡೆದ ದಿನ. ಮುಂದೆ ಇವರ ಹೆಸರಿನಲ್ಲಿ ನೋಬೆಲ್ ಪ್ರಶಸ್ತಿಯನ್ನು ಸ್ಥಾಪಿಸಲಾಯಿತು.

1947: ಹಾಲಿವುಡ್ ನಟಿ ರಿಟಾ ಹೆಯ್‌ವರ್ಥ್ ಹಾಗೂ ಪ್ರಿನ್ಸ್ ಅಲಿ ವಿವಾಹ ಸಮಾರಂಭ.

1952: ನವದೆಹಲಿಯಲ್ಲಿ ಸ್ವತಂತ್ರ ಭಾರತದ ಮೊದಲ ಸಂಸತ್ ಭವನದ ಉದ್ಘಾಟನೆ.

2005: ದಕ್ಷಿಣ ಆಫ್ರಿಕಾದಲ್ಲಿ ಲಿಂಗ ಪರವಾಗಿ ಸಮಾನ ವಿವಾಹಕ್ಕೆ ಕಾನೂನು ಮಾನ್ಯತೆ ನೀಡಿದ ಮಹತ್ವದ ದಿನ.

ಜನನ

1491: ಪ್ರಸಿದ್ಧ ಸ್ಪ್ಯಾನಿಷ್ ನೌಕಾನಾಯಕ ಪೆಡ್ರೊ ಆಲ್ವಾರೆಸ್ ಕಬ್ರಾಲ್

1844: ಪ್ರಸಿದ್ಧ ಜರ್ಮನ್ ವೈದ್ಯ ಮತ್ತು ವಿಜ್ಞಾನಿ ಕಾರ್ಲ್ ಬೆಂಡೆ

1915: ಚಿಲಿಯ ಕವಿ, ನೋಬೆಲ್ ಪುರಸ್ಕೃತ ಪಾಬ್ಲೋ ನೆರುಡಾ

1976: ಮೈಕ್ರೋಸಾಫ್ಟ್‌ನ ಸಹಸ್ಥಾಪಕ ಬಿಲ್ ಗೇಟ್ಸ್ ಅವರ ಪಾಲುದಾರ, ಉದ್ಯಮಿ ಗರ್ವಿನ್ ಬಲ್ಫ್

# ಡಿ.6ಕ್ಕೆ ಜಿಲ್ಲೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ

## ಹಲವು ಅಭಿವೃದ್ಧಿ ಕಾಮಗಾರಿಗೆ ಚಾಲನೆ | ಜಿಲ್ಲಾಡಳಿತ ಸಕಲ ಸಿದ್ಧತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಾಯಕತ್ವ ಬದಲಾವಣೆಯ ಜೋರು ಚರ್ಚೆಯ ನಡುವೆ ಡಿ. 6ಕ್ಕೆ ನಗರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನಿಗದಿಯಾಗಿದ್ದು ಜಿಲ್ಲಾಡಳಿತ ಅಗತ್ಯ ಸಿದ್ಧತೆ ಮಾಡಿಕೊಳ್ಳುತ್ತಿದೆ.

ಜು. 26 ರಂದು ಅರಸೀಕೆರೆಗೆ ಬಂದಿದ್ದ ಸಿದ್ದರಾಮಯ್ಯ ನೂರಾರು ಕೋಟಿ ರೂ. ವೆಚ್ಚದ ಕಾಮಗಾರಿಗೆ ಚಾಲನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದ್ದರು. ನಂತರ ಅ. 15 ರಂದು ಹಾಸನಾಂಬ ದರ್ಶನಕ್ಕಾಗಿ ಹಾಸನಕ್ಕೆ ಭೇಟಿ ನೀಡಿದ್ದರು. ಐದು ತಿಂಗಳಲ್ಲಿ ಮೂರನೇ ಬಾರಿಗೆ ಜಿಲ್ಲೆಗೆ ಭೇಟಿ ನೀಡುತ್ತಿದ್ದು ಪಕ್ಷದ ಕಾರ್ಯಕರ್ತರಲ್ಲಿ ಹುಮ್ಮಸು ಮೂಡಿದೆ. ವಿವಿಧ ಅಭಿವೃದ್ಧಿ ಕಾಮಗಾರಿಗೆ ಚಾಲನೆ ಹಾಗು ಶಂಕುಸ್ಥಾಪನೆಗಾಗಿ ಅವರು ಭೇಟಿ ನೀಡಲಿದ್ದಾರೆ.

ನೂತನ ಕಂದಾಯ ಗ್ರಾಮಗಳ ನಿವಾಸಿಗಳಿಗೆ ಹಕ್ಕುಪತ್ರ ವಿತರಣೆ ಹಾಗೂ ನಾನಾ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಿದ್ದಾರೆ. ಕಾಚೇನಹಳ್ಳಿ ಏತ ನೀರಾವರಿ 3ನೇ ಹಂತದ ಯೋಜನೆಗೆ ಸರ್ಕಾರ 200 ಕೋಟಿ ರೂ. ಅನುದಾನ ನೀಡಿದ್ದು ದೂತನೂರು ಕೆರೆಯಿಂದ ತರಬೇನಹಳ್ಳಿ ಕಾಲುವೆ ವರೆಗೆ ನೀರು ಹರಿಯಲಿದ್ದು ಕಾಮಗಾರಿಗೆ ಮುಖ್ಯಮಂತ್ರಿ ಭೂಮಿಪೂಜೆ ನೆರವೇರಿಸುವರು. ಬಿಎಂ ರಸ್ತೆಯಲ್ಲಿ ನಿರ್ಮಿಸಿರುವ ನೂತನ ತಾಲ್ಲೂಕು ಕಚೇರಿ ಪ್ರಜಾಸೌಧ ಕಟ್ಟಡ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಹೊಸ ಬಸ್ ನಿಲ್ದಾಣ ಪಕ್ಕ ನಿರ್ಮಾಣವಾಗಿರುವ ಪಾರ್ಕ್ ಅನ್ನು ಸಿದ್ದರಾಮಯ್ಯ ಉದ್ಘಾಟಿಸುವರು.




### ಪಟ್ಟಿ ಸಲ್ಲಿಸಲು ಶಾಸಕರ ತಯಾರಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮನ ಹಿನ್ನಲೆಯಲ್ಲಿ ತಮ್ಮ ತಮ್ಮ ಕ್ಷೇತ್ರದಲ್ಲಿ ಆಗಬೇಕಿರುವ ಕೆಲಸಗಳ ಕುರಿತು ಮುಖ್ಯಮಂತ್ರಿಗೆ ಪಟ್ಟಿ ಸಲ್ಲಿಸಲು ಶಾಸಕರು ತಯಾರಿ ನಡೆಸಿದ್ದಾರೆ. ಆ ಹಿನ್ನಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಇತ್ತೀಚೆಗೆ ಜಿಲ್ಲೆಯ ಶಾಸಕರು ಹಾಗು ಸಂಸದರ ಸಭೆ ನಡೆಸಿದ್ದಾರೆ. ಡಿ. 6ರ ಕಾರ್ಯಕ್ರಮ ಯಶಸ್ಸಿಗೆ ಸಹಕರಿಸಬೇಕು ಹಾಗು ಅಭಿವೃದ್ಧಿ ಸಂಬಂಧ ವಿಚಾರಗಳನ್ನು ಗಮನಕ್ಕೆ ತರಬೇಕೆಂದು ಸೂಚಿಸಿದ್ದಾರೆ.

### ಹಾಸನಾಂಬ ದೇಗುಲಕ್ಕೆ ನೂತನ ಸ್ಪರ್ಶ

ಹಾಸನದಲ್ಲಿ ಮುಖ್ಯವಾಗಿ ಆಗಬೇಕಿರುವುದು ಹಾಸನಾಂಬ ಜಾತ್ರೆ ವೇಳೆ ಭಕ್ತರಿಗೆ ಸುಲಭ ದರ್ಶನ. ಶಕ್ತಿದೇವತೆಯ ದರ್ಶನಕ್ಕಾಗಿ ಬರುತ್ತಿರುವ ಭಕ್ತರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಇದೆ. ವರ್ಷಕ್ಕೊಮ್ಮೆ ಮಾತ್ರ ಬಾಗಿಲು ತೆರೆಯುವುದರಿಂದ ಜನದಟ್ಟಣೆ ನಿಯಂತ್ರಣ ಜಿಲ್ಲಾಡಳಿತಕ್ಕೂ ಸವಾಲಿನ ಕೆಲಸವಾಗಿದೆ. ಈ ಬಾರಿ ಅಚ್ಚುಕಟ್ಟು ವ್ಯವಸ್ಥೆಯಿಂದಾಗಿ ಯಾವ ಸಮಸ್ಯೆ ಇಲ್ಲದಂತೆ ಮಹೋತ್ಸವ ಮುಗಿದಿದೆ. ಆದರೆ ಸರಳ ದರ್ಶನಕ್ಕಾಗಿ ಬೇರೆ ವ್ಯವಸ್ಥೆ ಮಾಡಬೇಕೆನ್ನುವುದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರ ಅಪೇಕ್ಷೆ. ದೇವಾಲಯದ ವಾಸ್ತುಶಿಲ್ಪ ಶೈಲಿಯನ್ನು ಗಮನದಲ್ಲಿಟ್ಟುಕೊಂಡು ಭಕ್ತರಿಗೆ ಅನುಕೂಲವಾಗುವಂತೆ ದೇಗುಲದ ಗರ್ಭಗುಡಿ ಮುಂದಿನ ನೂತನ ಕಟ್ಟಡದ ವಿನ್ಯಾಸದಲ್ಲಿ ಅಲ್ಪ ಬದಲಾವಣೆ ವಿಚಾರವಾಗಿ ಅವರು ಮುಖ್ಯಮಂತ್ರಿ ಜೊತೆಗೆ ಚರ್ಚಿಸಲು ನಿರ್ಧರಿಸಿದ್ದಾರೆ. ದೇಗುಲದ ಗರ್ಭಗುಡಿ ಮುಂದಿನ ನೂತನ ಕಟ್ಟಡದ ವಿನ್ಯಾಸದಲ್ಲಿ ಅಲ್ಪ ಬದಲಾವಣೆ ಹಾಗೂ ಕಲ್ಲು ಮಂಟಪ ನಿರ್ಮಾಣದ ಬಗ್ಗೆಯೂ ಚರ್ಚೆ ನಡೆದಿದೆ. ಈ ಕುರಿತು ಡಿ. 6ರ ಸಭೆಯಲ್ಲಿ ವಿಷಯ ಪ್ರಸ್ತಾಪವಾಗುವ ಸಾಧ್ಯತೆಗಳಿವೆ.

ಸ್ಥಳೀಯ ಸಂಸ್ಥೆ, ಗ್ರಾಮ ಪಂಚಾಯಿತಿ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗೆ ಶೀಘ್ರದಲ್ಲೇ ಮುಹೂರ್ತ ನಿಗದಿಯಾಗಲಿರುವುದರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಭೇಟಿ ಸಹಜವಾಗಿ ಕಾರ್ಯಕರ್ತರಲ್ಲಿ ಹುರುಪು ತರಿಸಿದೆ. ಜೆಡಿಎಸ್ ಭದ್ರಕೋಟೆ ಎನಿಸಿಕೊಂಡಿರುವ ಹಾಸನದಲ್ಲಿ ಕಾಂಗ್ರೆಸ್ ಬೇರು ಮಟ್ಟದಿಂದ ಸಂಘಟಿತವಾಗುತ್ತಿದೆ. ಒಂದು ವಿಧಾನಸಭಾ ಕ್ಷೇತ್ರ ಹಾಗು ಸಂಸದರನ್ನು ಹೊಂದಿರುವುದರಿಂದ 2028ರ ವಿಧಾನಸಭೆ ಚುನಾವಣೆಗೆ ಪಕ್ಷವನ್ನು ಮತ್ತಷ್ಟು ಬಲಪಡಿಸಲು ಸದ್ಯದ ಚುನಾವಣೆಗಳು ಮಹತ್ವದ್ದಾಗಿದೆ. ಹೀಗಾಗಿ ಮುಖ್ಯಮಂತ್ರಿ ಅವರು ವರ್ಷಾಂತ್ಯದಲ್ಲಿ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248